**All India Radio: Bangalore**
**Regional Bulletin In Kannada**
**21.06.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**21.06.2026 / 2.30 p.m.**

**<><><><>**

ಮುಖ್ಯಾಂಶಗಳು

1. ಎಲ್ಲೆಡೆ ೧೨ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ : ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಸಾಮೂಹಿಕ ಯೋಗಾಭ್ಯಾಸ
2. ಯೋಗದ ಮೂಲಕ ಭಾರತ ಇಡೀ ಜಗತ್ತನ್ನು ಬೆಸೆದಿದೆ : ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ
3. ಬೆಂಗಳೂರಿನ ೬೮ ಪರೀಕ್ಷಾ ಕೇಂದ್ರ ಸೇರಿದಂತೆ ಹಲವೆಡೆ ನೀಟ್ ಯುಜಿ ಮರು ಪರೀಕ್ಷೆ ಪ್ರಗತಿಯಲ್ಲಿ, ಬಿಗಿ ಭದ್ರತೆ
4. ರಾಜ್ಯದಲ್ಲಿ ನೈಋತ್ಯ ಮುಂಗಾರು ಚುರುಕು ; ೬ ಜಿಲ್ಲೆಗಳಿಗೆ ಇಂದು ಯೆಲ್ಲೋ ಅಲರ್ಟ್ ಘೋಷಣೆ

<><><><>

ವಿಶ್ವದಾದ್ಯಂತ ಇಂದು ೧೨ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಯಿತು. 'ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ', ಈ ವರ್ಷದ ಧ್ಯೇಯದೊಂದಿಗೆ ಯೋಗಪಟುಗಳು, ಯೋಗಾಸಕ್ತರ ಅಮಿತೋತ್ಸಾಹದ ಮಧ್ಯೆ, ಯೋಗ ಗುರುಗಳ ಮಾರ್ಗದರ್ಶನದಲ್ಲಿ ಇಂದಿನ ದಿನವನ್ನು ಆಚರಿಸಲಾಯಿತು. ರಾಜ್ಯ ಆಯುಷ್ ಇಲಾಖೆ ವತಿಯಿಂದ ಬೆಂಗಳೂರಿನ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ನಡೆದ ೧೨ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್, ವಿಧಾನಸಭೆ ಉಪಾಧ್ಯಕ್ಷ ರುದ್ರಪ್ಪ ಲಮಾಣಿ, ರಾಜಕೀಯ ನಾಯಕರು, ಸೇರಿದಂತೆ ಹಲವು ಗಣ್ಯರು ಪಾಲ್ಗೊಂಡರು. ಈ ವೇಳೆ ಮಾತನಾಡಿದ ಸಚಿವ ಯು.ಟಿ.ಖಾದರ್ ವಿಶ್ವ ಮಟ್ಟದಲ್ಲಿ ಮನ್ನಣೆ ಪಡೆದಿರುವ ಯೋಗವನ್ನು ನಾವು ಹೆಚ್ಚಿನ ಜನರಿಗೆ ಪರಿಚಯಿಸಬೇಕಾಗಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಹಲವು ಕಾರ್ಯಕ್ರಮಗಳನ್ನ

ಹಾಕಿಕೊಳ್ಳುತ್ತಿದೆ ಎಂದು ತಿಳಿಸಿದರು. ಈ ಯೋಗದಿನಾಚರಣೆ ಒಂದು ದಿನಕ್ಕೆ ಸೀಮಿತವಾಗದೇ ಇಡೀ ಜೀವ ಸಂಕುಲದ 'ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ' ಎಂಬ ಘೋಷವಾಕ್ಯದಡಿ ವೈವಿಧ್ಯಮಯ ಕಾರ್ಯಕ್ರಮಗಳನ್ನು ವರ್ಷವಿಡೀ ಹಮ್ಮಿಕೊಳ್ಳಲಾಗುತ್ತಿದೆ ಎಂದರು. ೧೨ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ರಾಜ್ಯದ ವಿವಿಧೆಡೆ ಇಂದು ಆಚರಿಸಲಾಯಿತು.

ಬೆಳಗಾವಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಆಯುಷ್ ಇಲಾಖೆ ಸಹಯೋಗದಲ್ಲಿ ಸುವರ್ಣ ವಿಧಾನಸೌಧದಲ್ಲಿ ಆಯೋಜಿಸಿದ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಪಾಲ್ಗೊಂಡರು. ಬಳಿಕ ಮಾತನಾಡಿದ ಅವರು, ೫ ಸಾವಿರ ವರ್ಷಗಳ ಇತಿಹಾಸ ಹೊಂದಿರುವ ಯೋಗಾಸನವನ್ನು ೧೪೦ಕ್ಕೂ ಹೆಚ್ಚಿನ ದೇಶಗಳು ಒಪ್ಪಿಕೊಂಡಿವೆ. ಆಧುನಿಕ ಜೀವನ ಶೈಲಿಯಲ್ಲಿ ಉತ್ತಮ ಆರೋಗ್ಯ ಹೊಂದಲು ಯೋಗಾಭ್ಯಾಸ ಅಗತ್ಯ ಎಂದರು.

ಧ್ವನಿ : ಪ್ರಲ್ಹಾದ್ ಜೋಶಿ (೩೫ ಸೆಕೆಂಡ್‌ಗಳು)

ಮಂಡ್ಯ ನಗರದ ಕೆಎಸ್‌ಸಿಎ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆದ ವಿಶ್ವ ಯೋಗ ದಿನಾಚರಣೆಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಮಾನಸಿಕ ಹಾಗೂ ದೈಹಿಕ ಆರೋಗ್ಯಕ್ಕೆ ಯೋಗ ಸಹಕಾರಿ ಎಂದರು. ಯೋಗದ ಮೂಲಕ ಭಾರತವು ಇಡೀ ಜಗತ್ತನ್ನು ಬೆಸೆದಿದೆ. ಯೋಗ ಜನ ಸಾಮಾನ್ಯರ ಜೀವನಶೈಲಿಯ ಅವಿಭಾಜ್ಯ ಅಂಗವಾಗಿದೆ ಎಂದರು. ಇದೇ ವೇಳೆ ಸಚಿವರು ವಿವಿಧ ಆಸನಗಳನ್ನು ಪ್ರದರ್ಶಿಸಿದರು.

ಬೆಂಗಳೂರಿನ ದೂರದರ್ಶನ ಕೇಂದ್ರದಲ್ಲಿ ನಡೆದ ೧೨ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಪಾಲ್ಗೊಂಡು 'ತಾಯಿಯ ಹೆಸರಿನಲ್ಲಿ ಒಂದು ಗಿಡ' ಅಭಿಯಾನದಡಿ ಸಸಿ ನೆಟ್ಟರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ನೆಲಮಂಗಲ ಹಾಗೂ ಹೊಸಕೋಟೆ ತಾಲ್ಲೂಕುಗಳಲ್ಲಿ ಸ್ಥಳೀಯ ಆಡಳಿತ ಹಾಗೂ ವಿವಿಧ ಯೋಗ ಸಂಸ್ಥೆಗಳ ನೇತೃತ್ವದಲ್ಲಿ ಯೋಗ ದಿನ ಆಚರಿಸಲಾಯಿತು.

ಮೈಸೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಯೋಗವು ಭಾರತದ ಪುರಾತನ ಪರಂಪರೆಯಾಗಿದೆ. ಯೋಗಾಭ್ಯಾಸ

ಕೇವಲ ದೈಹಿಕ ಚಲನೆ ಮಾತ್ರವಲ್ಲದೇ ಸಹಿಷ್ಣುತೆ ಮತ್ತು ಸಾಮರ್ಥ್ಯವನ್ನು ಹೆಚ್ಚಿಸುತ್ತಿದೆ ಎಂದು ಅವರು ಹೇಳಿದ್ದಾರೆ.

ಬಾಗಲಕೋಟೆಯಲ್ಲಿ ಮಾತನಾಡಿದ ಸಂಸದ ಪಿ.ಸಿ.ಗದ್ದಿಗೌಡರ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಪ್ರಯತ್ನದಿಂದ ಯೋಗಕ್ಕೆ ಜಾಗತಿಕ ಮಾನ್ಯತೆ ದೊರೆತಿದ್ದು, ಜೂನ್ ೨೧ ಅನ್ನು ವಿಶ್ವ ಯೋಗ ದಿನವನ್ನಾಗಿ ಆಚರಿಸಲಾಗುತ್ತಿದೆ ಎಂದು ಹೇಳಿದರು.

ಧ್ವನಿ : ಪಿ.ಸಿ.ಗದ್ದಿಗೌಡರ (೩೮ ಸೆಕೆಂಡ್‌ಗಳು)

ಬಳ್ಳಾರಿಯಲ್ಲಿ ನೆಡದ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯ್ತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೇರ್ ಪಾಲ್ಗೊಂಡು, ಯೋಗದ ಮಹತ್ವ ತಿಳಿಸಿದರು. ಇದೇ ವೇಳೆ ಸಾರ್ವಜನಿಕರು ವಿವಿಧ ಆಸನಗಳನ್ನು ಪ್ರದರ್ಶಿಸಿದರು. ಎಸ್‌ಐಆರ್ ಬಗ್ಗೆ ಜಾಗೃತಿ ಮೂಡಿಸುವ ಯೋಗ ಪ್ರದರ್ಶನ ಗಮನ ಸೆಳೆಯಿತು.

ಹಾಸನದಲ್ಲಿ ಸಂಸದ ಶ್ರೇಯಸ್ ಪಟೇಲ್, ಶಾಸಕ ಸ್ವರೂಪ್ ಪ್ರಕಾಶ್, ಜಿಲ್ಲಾಧಿಕಾರಿ ಕೆ.ಎಸ್ ಲತಾ ಕುಮಾರಿ ಸೇರಿದಂತೆ ಹಲವರು ಯೋಗಾಸನಗಳಲ್ಲಿ ಪಾಲ್ಗೊಂಡರು. ಯೋಗ ದೈಹಿಕ ಮಾನಸಿಕ ಆರೋಗ್ಯಕ್ಕೆ ಸಹಕಾರಿ ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು.

ವಿಜಯನಗರ ಜಿಲ್ಲೆಯ ವಿಶ್ವ ಪ್ರಸಿದ್ಧ ಹಂಪಿಯ ಆನೆ ಲಾಯದ ಮುಂಭಾಗದಲ್ಲಿ ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆ ವತಿಯಿಂದ ಯೋಗ ಪ್ರದರ್ಶನವನ್ನು ಆಯೋಜಿಸಲಾಗಿತ್ತು. ಕಮಲಾಪುರದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿಯರು, ಪುರಾತತ್ವ ಇಲಾಖೆಯ ಸಿಬ್ಬಂದಿಗಳು ಮತ್ತು ಸಾರ್ವಜನಿಕರು ಸೇರಿದಂತೆ ೨೦೦ ಜನರು ಯೋಗ ದಿನಾಚರಣೆಯಲ್ಲಿ ಪಾಲ್ಗೊಂಡರು.

ಕೋಲಾರದ ಸರ್.ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಸಂಸದ ಎಂ.ಮಲ್ಲೇಶ್ ಬಾಬು ದೈನಂದಿನ ಒತ್ತಡದ ಜೀವನದಲ್ಲಿ ಪ್ರತಿಯೊಬ್ಬರೂ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ನಿತ್ಯವೂ ಯೋಗಾಭ್ಯಾಸ ಮಾಡುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ಪ್ರತಿಪಾದಿಸಿದರು.

ನೈರುತ್ಯ ರೈಲ್ವೆ ವತಿಯಿಂದ ಹುಬ್ಬಳ್ಳಿಯಲ್ಲಿ ಚಾಲುಕ್ಯ ರೈಲ್ವೆ ಇನ್‌ಸ್ಟಿಟ್ಯೂಟ್‌ನಲ್ಲಿ ನಡೆದ ಯೋಗ ಕಾರ್ಯಕ್ರಮದಲ್ಲಿ ರೈಲ್ವೆ ಅಧಿಕಾರಿಗಳು, ಸಿಬ್ಬಂದಿ ಹಾಗೂ ಅವರ ಕುಟುಂಬಸ್ಥರು ಪಾಲ್ಗೊಂಡಿದ್ದರು.

<><><>

ನೈಋತ್ಯ ರೈಲ್ವೆ ಬೆಂಗಳೂರು ವಿಭಾಗದ ವತಿಯಿಂದ ಎಂ.ಜಿ.ಕಾಲೋನಿಯ ರೈಲ್ವೆ ಮೈದಾನದಲ್ಲಿ ಇಂದು ೧೨ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಯಿತು. ರೈಲ್ವೆ ಅಧಿಕಾರಿಗಳು, ಸಿಬ್ಬಂದಿ ಹಾಗೂ ಅವರ ಕುಟುಂಬ ಸದಸ್ಯರು ಪಾಲ್ಗೊಂಡು ಸಾಮೂಹಿಕವಾಗಿ ಯೋಗ ಪ್ರದರ್ಶಿಸಿದರು. ಈ ವೇಳೆ ಮಾತನಾಡಿದ ಬೆಂಗಳೂರು ವಿಭಾಗದ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಆಶುತೋಷ್ ಕುಮಾರ್ ಸಿಂಗ್ ದೈನಂದಿನ ಜೀವನದಲ್ಲಿ ಯೋಗದ ಮಹತ್ವದ ಬಗ್ಗೆ ವಿವರಿಸಿದರು. ಯೋಗವು ದೈಹಿಕ, ಆರೋಗ್ಯಕ್ಕೆ ಮಾತ್ರವಲ್ಲದೇ ಮಾನಸಿಕ ಯೋಗಕ್ಷೇಮ ಮತ್ತು ಮನಶಾಂತಿಗೆ ಸಹಕಾರಿಯಾಗಿದೆ ಎಂದರು. ಆರ್ಟ್ ಆಫ್ ಲೀವಿಂಗ್‌ನ ಯೋಗ ತರಬೇತುದಾರ ಕಿಶೋರ್ ಮತ್ತು ಅವರ ತಂಡದ ಮಾರ್ಗದರ್ಶನದಲ್ಲಿ ಯೋಗಾಭ್ಯಾಸ ನಡೆಸಲಾಯಿತು.

<><><>

ದೇಶಾದ್ಯಂತ ಇಂದು ನೀಟ್-ಯುಜಿ ಮರು ಪರೀಕ್ಷೆ ನಡೆಯುತ್ತಿದೆ. ಬೆಂಗಳೂರಿನ ೬೮ ಪರೀಕ್ಷಾ ಕೇಂದ್ರಗಳಲ್ಲಿ ಬಿಗಿ ಭದ್ರತೆಯಲ್ಲಿ ಪರೀಕ್ಷೆ ಪ್ರಗತಿಯಲ್ಲಿದ್ದು, ಯಾವುದೇ ಲೋಪವಾಗದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ೮ ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು ೩ ಸಾವಿರದ ೩೭೪ ವಿದ್ಯಾರ್ಥಿಗಳು ನೀಟ್-ಯುಜಿ ಪರೀಕ್ಷೆ ಎದುರಿಸುತ್ತಿದ್ದು, ವಿದ್ಯಾರ್ಥಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯವಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯುತ್ ವ್ಯವಸ್ಥೆ, ಸಿ.ಸಿ ಕ್ಯಾಮೆರಾ ಅಳವಡಿಕೆ, ಆಂಬುಲೆನ್ಸ್ ಸೇವೆ, ಸ್ವಚ್ಛತೆ ಮತ್ತು ಪರೀಕ್ಷೆಗೆ ಹಾಜರಾಗುವ ವಿಶೇಷ ಚೇತನ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ವೀಲ್ ಚೇರ್ ವ್ಯವಸ್ಥೆಯನ್ನು ಆರೋಗ್ಯ ಘಟಕದಿಂದ ಕಲ್ಪಿಸಲಾಗಿದೆ.

<><><>

ಘನ ತ್ಯಾಜ್ಯದಿಂದ ಹಸಿರು ಇದ್ದಿಲು ಉತ್ಪಾದಿಸುವ ದೇಶದ ಎರಡನೇ ಘಟಕ ವಾಣಿಜ್ಯ ನಗರಿ ಹುಬ್ಬಳ್ಳಿಯಲ್ಲಿ ಶೀಘ್ರದಲ್ಲೇ ಕಾರ್ಯಾರಂಭ ಮಾಡಲಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ೭೮ ಕೋಟಿ ರೂಪಾಯಿ ವೆಚ್ಚದಲ್ಲಿ ಈ

ಘಟಕವನ್ನು ನಿರ್ಮಿಸಲಾಗುತ್ತಿದ್ದು, ದೇಶದಲ್ಲಿ ವಾರಾಣಸಿ ಬಿಟ್ಟರೆ ಹುಬ್ಬಳ್ಳಿಯಲ್ಲಿಯೇ ಈ ಅತ್ಯಾಧುನಿಕ ಉತ್ಪಾದನಾ ಘಟಕ ಸ್ಥಾಪಿಸಲಾಗುತ್ತಿದೆ. ಇದರಿಂದ ಮಹಾನಗರದ ಕಸಕ್ಕೆ ಮುಕ್ತಿ ದೊರೆಯಲಿದೆ ಎಂದರು.

<><><><>

ರಾಯಚೂರು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನಾಳೆ ಬೆಳಿಗ್ಗೆ ೧೦ಗಂಟೆಯಿಂದ ಮಧ್ಯಾಹ್ನ ೧ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ. ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ. ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ ೧೮ ರಿಂದ ೨೮ ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ ೦೮೫೩೨-೨೩೧೬೮೮೪, ೯೦೦೮೨೧೧೭೫೦ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ರಾಜ್ಯದಲ್ಲಿ ನೈಋತ್ಯ ಮುಂಗಾರು ಚುರುಕುಗೊಂಡಿದ್ದು, ೬ ಜಿಲ್ಲೆಗಳಿಗೆ ಇಂದು ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಉಡುಪಿ, ದಕ್ಷಿಣ ಕನ್ನಡ, ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದ್ದು, ಬೆಂಗಳೂರಿನಲ್ಲಿ ಸಾಧಾರಣ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಪ್ರಾದೇಶಿಕ ಕಚೇರಿ ಮಾಹಿತಿ ನೀಡಿದೆ.

<><><><>

ಚಿತ್ರದುರ್ಗ ಜಿಲ್ಲೆಯಲ್ಲಿ ಈ ತಿಂಗಳ ೨೮ ರಿಂದ ಜುಲೈ ೧ನೇ ತಾರೀಖಿನ ವರೆಗೆ ಪಲ್ಸ್ ಪೋಲಿಯೊ ಲಸಿಕೆ ಅಭಿಯಾನ ನಡೆಯಲಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾಕ್ಟರ್ ಕಾಶಿ ಮಾಹಿತಿ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>